**ಕರ್ನಾಟಕ ಸರ್ಕಾರ**

ಸಂಖ್ಯೆ:ಹೆಚ್‌ಡಿ 183 ಕೆಎಎ 2014

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ: 22/09/2014.

**ಸುತ್ತೋಲೆ**

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ವನ್ಯಜೀವಿ), ಬೆಂಗಳೂರು ಇವರು ವನ್ಯಜೀವಿ ಸಂರಕ್ಷಣಾ ಕಾಯಿದೆ 1972ರ ಕಲಂ 34(3)ರ ಪ್ರಕಾರ ವನ್ಯಧಾಮಗಳ ಗಡಿಯಿಂದ ಹೊರಗೆ 10 ಕಿ.ಮೀ. ಪ್ರದೇಶದ ವ್ಯಾಪ್ತಿಯಲ್ಲಿ ಬರುವಂತಹ ಗ್ರಾಮಗಳ ಜನರು ಬಂದೂಕು ಪರವಾನಗಿಯನ್ನು ಮಂಜೂರು ಮಾಡುವಂತೆ ಕೋರಿ ಸಲ್ಲಿಸಿದ ಮನವಿಯ ಬಗ್ಗೆ ರಾಜ್ಯದ ಮುಖ್ಯ ವನ್ಯಜೀವಿ ಪರಿಪಾಲಕರ ಇಲ್ಲವೇ, ಅಧಿಕೃತ ಅಧಿಕಾರಿಯ ಸಮ್ಮತಿಯನ್ನು ಪಡೆಯದೇ ಬಂದೂಕು ಪರವಾನಗಿಯನ್ನು ಮಂಜೂರು ಮಾಡಬಾರದೆಂದು ಕೋರಿದ್ದು, ಈ ಹಿನ್ನೆಲೆಯಲ್ಲಿ ಇಂತಹ ಪ್ರಕರಣಗಳಲ್ಲಿ ವನ್ಯಜೀವಿ ಸಂರಕ್ಷಣಾ ಕಾಯಿದೆ 1972ರ ಕಲಂ 34(3)ರ ಪ್ರಕಾರ ರಾಜ್ಯದ ಮುಖ್ಯ ವನ್ಯಜೀವಿ ಪಾಲಕರ ಪೂರ್ವ ಸಹಮತಿಯನ್ನು ಪಡೆದು ಶಸ್ತ್ರ ಪರವಾನಗಿಯನ್ನು ಮಂಜೂರು ಮಾಡುವಂತೆ ಈ ಮೂಲಕ ಸೂಚಿಸಿದೆ.

22/9

(ಗೋವಿಂದಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ
(ಕಾನೂನು ಮತ್ತು ಸುವ್ಯವಸ್ಥೆ).

**ಇವರಿಗೆ**

ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಪೋಲೀಸ್ ಆಯುಕ್ತರು, ಬೆಂಗಳೂರು ನಗರ/ ಹುಬ್ಬಳ್ಳಿ-ಧಾರವಾಡ ನಗರ/ ಮೈಸೂರು ನಗರ/ ಮಂಗಳೂರು ನಗರ/ಬೆಳಗಾವಿ ನಗರ ಹಾಗೂ ರಾಜ್ಯದ ಎಲ್ಲಾ ಪೊಲೀಸ್ ಅಧೀಕ್ಷಕರುಗಳು.

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಗೆ,
2. ಸರ್ಕಾರದ ಉಪ ಕಾರ್ಯದರ್ಶಿ(ಕಾನೂನು & ಸುವ್ಯವಸ್ಥೆ)ರವರ ಆಪ್ತ ಸಹಾಯಕರಿಗೆ.

Letters_all

8